Akashvani: Bangalore
National Bulletin In Kannada
ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

19.10.2025 : 7.35 AM
*******

ಮುಖ್ಯಾಂಶಗಳು

೧. ಎಲ್ಲಾ ಋಳ ವಸ್ತುಗಳಿಗೆ ಜಿಎಸ್‌ಟಿ ಪ್ರಯೋಜನಗಳ ಸಂಪೂರ್ಣ ವರ್ಗಾವಣೆ- ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್

೨. ಚಂದ್ರನ ಅಧ್ಯಯನದಲ್ಲಿ ಮಹತ್ವದ ಮೈಲುಗಲ್ಲು ಸಾಧಿಸಿದ ಚಂದ್ರಯಾನ-೨ : ಇಸ್ರೋ ಘೋಷಣೆ

೩. ಕದನ ವಿರಾಮಕ್ಕೆ ಅಫ್ಘಾನಿಸ್ತಾನ-ಪಾಕಿಸ್ತಾನ ಒಪ್ಪಿಗೆ: ಕತಾರ್ ವಿದೇಶಾಂಗ ಸಚಿವಾಲಯ ಮಾಹಿತಿ

೪. ಏಕದಿನ ಕ್ರಿಕೆಟ್: ಸರಣಿಯ ಮೊದಲ ಪಂದ್ಯದಲ್ಲಿಂದು ಭಾರತ-ಆಸ್ಟ್ರೇಲಿಯಾ ಮುಖಾಮುಖಿ

><><><><><

ಪರಿಷ್ಕೃತ ಜಿಎಸ್‌ಟಿಯ ಪ್ರಯೋಜನಗಳು ಗ್ರಾಹಕರಿಗೆ ತಲುಪುತ್ತಿವೆ ಎಂಬುದನ್ನು ಖಚಿತಪಡಿಸಿಕೊಳ್ಳಲು ಹಣಕಾಸು ಸಚಿವಾಲಯ, ಋಳ ಉತ್ಪನ್ನಗಳ ಬೆಲೆಗಳನ್ನು ಸೂಕ್ಷ್ಮವಾಗಿ ಗಮನಿಸಲಾತ್ತಿದೆ ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ತಿಳಿಸಿದ್ದಾರೆ.

ನವದೆಹಲಿಯಲ್ಲಿ ಜಿಎಸ್‌ಟಿ ಬಚತ್ ಉತ್ಸವದ ಜಂಟಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಮುಂದಿನ ಪೀಳಿಗೆಯ ಜಿಎಸ್‌ಟಿ ಪ್ರಯೋಜನಗಳನ್ನು ಎಲ್ಲಾ ಋಳ ವಸ್ತುಗಳಿಗೆ ಸಂಪೂರ್ಣವಾಗಿ ವರ್ಗಾಯಿಸಲಾಗಿದೆ ಎಂದು ಹೇಳಿದ್ದಾರೆ. ಜಿಎಸ್‌ಟಿ ೨.೦ ಸುಧಾರಣೆಗಳು ದೇಶದ ಆರ್ಥಿಕತೆಗೆ ಪ್ರಮುಖ ಉತ್ತೇಜನ ನೀಡಿದ್ದು, ಹಬ್ಬದ ಋತುವಿನಲ್ಲಿ ಎಲೆಕ್ಟ್ರಾನಿಕ್ಸ್, ಆಟೋಮೊಬೈಲ್

ಮತ್ತು ಗ್ರಾಹಕ ವಸ್ತುಗಳಂತಹ ಪ್ರಮುಖ ವಲಯಗಳಲ್ಲಿ ದಾಖಲೆಯ ಮಾರಾಟಕ್ಕೆ ಕಾರಣವಾಗಿವೆ. ಜಿಎಸ್‌ಟಿ ದರ ಕಡಿತದ ಪ್ರಯೋಜನಗಳು ಸಾಮಾನ್ಯ ಜನರಿಗೆ ತಲುಪುತ್ತಿವೆ ಎಂದರು.

ಧ್ವನಿ:ನಿರ್ಮಲಾ ಸೀತಾರಾಮನ್(೨೬ ಸೇಕೆಂಡ್)

ಈ ಸಂದರ್ಭದಲ್ಲಿ ಮಾತನಾಡಿದ ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್, ಈ ವರ್ಷದ ನವರಾತ್ರಿ ಉತ್ಸವದಲ್ಲಿ ದಾಖಲೆಯ ಮಾರಾಟ ಕಂಡುಬಂದಿದೆ. ಹಿಂದಿನ ನವರಾತ್ರಿ ಉತ್ಸವದಲ್ಲಿ ದಾಖಲಾದ ಮಾರಾಟಕ್ಕೆ ಹೋಲಿಸಿದರೆ ಈ ವರ್ಷದ ನವರಾತ್ರಿ ಋತುವಿನಲ್ಲಿ ಎಲೆಕ್ಟ್ರಾನಿಕ್ಸ್ ಮಾರಾಟದಲ್ಲಿ ಶೇಕಡಾ ೨೫ ರಷ್ಟು ಹೆಚ್ಚಳವಾಗಿದೆ ಎಂದು ತಿಳಿಸಿದ್ದಾರೆ. ಜಿಎಸ್‌ಟಿ ಸುಧಾರಣೆಗಳಿಂದಾಗಿ ಆಹಾರದ ಬೆಲೆಗಳು ಕಡಿಮೆಯಾಗುತ್ತಿವೆ. ಎಲೆಕ್ಟ್ರಾನಿಕ್ಸ್‌ಗಳಿಗೆ ಹೆಚ್ಚುತ್ತಿರುವ ಬೇಡಿಕೆಯು ಎಲೆಕ್ಟ್ರಾನಿಕ್ಸ್ ಉತ್ಪಾದನಾ ಉದ್ಯಮಕ್ಕೆ ನೇರವಾಗಿ ಪ್ರಯೋಜನವನ್ನು ನೀಡುತ್ತಿದೆ ಎಂದು ಅವರು ಹೇಳಿದ್ದಾರೆ. ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಮಾತನಾಡಿ, ನವರಾತ್ರಿ ಋತುವಿನಲ್ಲಿ ವಾಹನ ಮಾರಾಟವು ಹೆಚ್ಚಾಗಿದೆ ಮತ್ತು ಎಲೆಕ್ಟ್ರಾನಿಕ್ಸ್ ವಲಯವು ಎಲ್ಲಾ ದಾಖಲೆಗಳನ್ನು ಮುರಿದಿದೆ ಎಂದು ತಿಳಿಸಿದ್ದಾರೆ.

><><><><><

ಚಂದ್ರಯಾನ-೨ ತನ್ನ ವೈಜ್ಞಾನಿಕ ಉಪಕರಣಗಳನ್ನು ಬಳಸಿಕೊಂಡು, ಸೂರ್ಯನಿಂದ ಬರುವ ಕರೋನಲ್ ಮಾಸ್ ಎಜೆಕ್ಷನ್‌ಗಳ ಪರಿಣಾಮಗಳ ಮೊದಲ ವೀಕ್ಷಣೆಯನ್ನು ಮಾಡಿದೆ ಎಂದು ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ-ಇಸ್ರೋ ತಿಳಿಸಿದೆ. ಈ ವೀಕ್ಷಣೆಯು ಚಂದ್ರನ ಬಾಹ್ಯಗೋಳ, ಚಂದ್ರನ ತೆಳುವಾದ ವಾತಾವರಣ ಮತ್ತು ಅದರ ಮೇಲ್ಮೈಯಲ್ಲಿ ಬಾಹ್ಯಾಕಾಶ ಹವಾಮಾನದ ಪ್ರಭಾವವನ್ನು ಅರ್ಥಮಾಡಿಕೊಳ್ಳಲು ಸಹಾಯ ಮಾಡುತ್ತದೆ ಎಂದು ಇಸ್ರೋ ಹೇಳಿದೆ. ೨೦೧೯ ರ ಜುಲೈ ೨೨ ರಂದು ಶ್ರೀಹರಿಕೋಟಾದಿಂದ ಜಿಎಸ್‌ಎಲ್‌ವಿ ರಾಕೆಟ್ ಬಳಸಿ ಉಡಾವಣೆಯಾದ ಚಂದ್ರಯಾನ-೨, ಎಂಟು ಪ್ರಾಯೋಗಿಕ ಪೇಲೋಡ್‌ಗಳನ್ನು ಹೊತ್ತೊಯ್ದಿತು. ೨೦೧೯ ರ ಆಗಸ್ಟ್ ೨೦ ರಂದು, ಚಂದ್ರಯಾನ-೨ ಅನ್ನು ಚಂದ್ರನ ಸುತ್ತಲಿನ ದೀರ್ಘವೃತ್ತದ ಕಕ್ಷೆಗೆ

ಯಶಸ್ವಿಯಾಗಿ ಸೇರಿಸಲಾಯಿತು. ೨೦೧೯ರ ಸೆಪ್ಟೆಂಬರ್ ೭ ರಂದು, ವಿಕ್ರಮ್ ಲ್ಯಾಂಡರ್‌ನೊಂದಿಗಿನ ಸಂಪರ್ಕವು ನಷ್ಟವಾಗಿದ್ದರೂ, ಆರ್ಬಿಟರ್ ಸಂಪೂರ್ಣವಾಗಿ ಕಾರ್ಯನಿರ್ವಹಿಸುತ್ತಿದ್ದು, ಚಂದ್ರನ ಸುತ್ತ ತನ್ನ ಕಕ್ಷೆಯಲ್ಲಿ ತಿರುಗುತ್ತಿದೆ.

><><><><

ಭಾರತೀಯ ರೈಲ್ವೆ ಕಾರ್ಯಾಚರಣೆಗೆ ಸಂಬಂಧಿಸಿದಂತೆ ತಪ್ಪುದಾರಿಗೆಳೆಯುವ ವಿಡಿಯೋಗಳನ್ನು ಹಂಚಿಕೊಳ್ಳುವ ಸಾಮಾಜಿಕ ಮಾಧ್ಯಮ ಖಾತೆಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲು ರೈಲ್ವೆ ಸಚಿವಾಲಯ ನಿರ್ಧರಿಸಿದೆ. ಈ ಹಬ್ಬದ ಸಮಯದಲ್ಲಿ, ಕೆಲವು ಸಾಮಾಜಿಕ ಮಾಧ್ಯಮ ಖಾತೆಗಳು ಹಳೆಯ ಅಥವಾ ತಪ್ಪುದಾರಿಗೆಳೆಯುವ ವಿಡಿಯೋಗಳನ್ನು ಪ್ರಸಾರ ಮಾಡುತ್ತಿವೆ. ಇದು ಪ್ರಯಾಣಿಕರಲ್ಲಿ ಗೊಂದಲ ಉಂಟುಮಾಡುತ್ತಿದೆ ಎಂದು ರೈಲ್ವೆ ಸಚಿವಾಲಯ ತಿಳಿಸಿದೆ. ಪ್ರಯಾಣಿಕರಲ್ಲಿ ಅನಗತ್ಯ ಭೀತಿಯನ್ನು ಉಂಟುಮಾಡಿದ ಹಳೆಯ ಅಥವಾ ತಪ್ಪುದಾರಿಗೆಳೆಯುವ ವಿಡಿಯೊಗಳನ್ನು ಪ್ರಸಾರ ಮಾಡುವ ೨೦ ಕ್ಕೂ ಹೆಚ್ಚು ಸಾಮಾಜಿಕ ಮಾಧ್ಯಮ ಖಾತೆಗಳನ್ನು ಅಧಿಕಾರಿಗಳು ಗುರುತಿಸಿದ್ದಾರೆ. ರೈಲ್ವೆ ಆಡಳಿತ, ಈ ಖಾತೆಗಳ ವಿರುದ್ಧ ಎಫ್‌ಐಆರ್‌ಗಳನ್ನು ದಾಖಲಿಸುವ ಪ್ರಕ್ರಿಯೆಯನ್ನು ಪ್ರಾರಂಭಿಸಿದೆ. ಅಂತಹ ಸಮಾಜವಿರೋಧಿ ಚಟುವಟಿಕೆಗಳನ್ನು ಪತ್ತೆಹಚ್ಚಲು ಮತ್ತು ನಿಭಾಯಿಸಲು ೨೪ ಗಂಟೆಗಳ ಸಾಮಾಜಿಕ ಮಾಧ್ಯಮ ಮೇಲ್ವಿಚಾರಣಾ ವ್ಯವಸ್ಥೆಯನ್ನು ಜಾರಿಗೆ ತಂದಿದೆ ಎಂದು ರೈಲ್ವೆ ಸಚಿವಾಲಯ ಮಾಹಿತಿ ನೀಡಿದೆ. ಸತ್ಯಗಳನ್ನು ಪರಿಶೀಲಿಸದೆ, ನಿಲ್ದಾಣಗಳಲ್ಲಿ ಜನಸಂದಣಿ ಅಥವಾ ಇತರೆ ಘಟನೆಗಳ ವಿಡಿಯೊಗಳನ್ನು ಹಂಚಿಕೊಳ್ಳುವುದನ್ನು ತಡೆಯುವಂತೆ ಸಚಿವಾಲಯ, ಎಲ್ಲಾ ಸಾಮಾಜಿಕ ಮಾಧ್ಯಮ ಬಳಕೆದಾರರಿಗೆ ಮನವಿ ಮಾಡಿದೆ. ಪ್ರಯಾಣಿಕರು, ಅಧಿಕೃತ ರೈಲ್ವೆ ಅಧಿಸೂಚನೆಗಳು ಮತ್ತು ಸಚಿವಾಲಯದ ಪರಿಶೀಲಿಸಿದ ಸಾಮಾಜಿಕ ಮಾಧ್ಯಮ ಖಾತೆಗಳನ್ನು ಮಾತ್ರ ಅವಲಂಬಿಸುವಂತೆ ಕೋರಿದೆ.

><><><><

ಹಬ್ಬದ ಋತುವಿನಲ್ಲಿ ಉತ್ತರ ಪ್ರದೇಶ, ಬಿಹಾರ ಸೇರಿದಂತೆ ಉತ್ತರ ಭಾರತದ ವಿವಿಧ ಸ್ಥಳಗಳಿಗೆ ಒಂದು ಸಾವಿರದ ೭೦೦ ಕ್ಕೂ ಹೆಚ್ಚು ವಿಶೇಷ ರೈಲುಗಳನ್ನು ಕೇಂದ್ರ ರೈಲ್ವೆ ನಿರ್ವಹಿಸುತ್ತಿದೆ. ದೀಪಾವಳಿ ಮತ್ತು ಛಟ್ ಹಬ್ಬದ ಸಮಯದಲ್ಲಿ ಭಕ್ತರು ಮತ್ತು ಪ್ರಯಾಣಿಕರಿಗೆ ಸುಗಮ ಮತ್ತು ಆರಾಮದಾಯಕ ಪ್ರಯಾಣವನ್ನು ಖಚಿತಪಡಿಸಿಕೊಳ್ಳುವ ಗುರಿಯನ್ನು ಈ ಕ್ರಮ ಹೊಂದಿದೆ.

><><><><

ಹಲವಾರು ದಿನಗಳ ಗಡಿಯಾಚೆಗಿನ ದಾಳಿಗಳ ನಂತರ ಅಫ್ಘಾನಿಸ್ತಾನ ಮತ್ತು ಪಾಕಿಸ್ತಾನ ತಕ್ಷಣದ ಕದನ ವಿರಾಮಕ್ಕೆ ಒಪ್ಪಿಕೊಂಡಿವೆ ಎಂದು ಕತಾರ್ ವಿದೇಶಾಂಗ ಸಚಿವಾಲಯ ಘೋಷಣೆ ಮಾಡಿದೆ. ದೋಹಾದಲ್ಲಿ ನಿನ್ನೆ ಕತಾರ್ ಮತ್ತು ಟರ್ಕಿಯೆ ಮಧ್ಯಸ್ಥಿಕೆಯಲ್ಲಿ ನಡೆದ ಮಾತುಕತೆಯ ಸಂದರ್ಭದಲ್ಲಿ ಎರಡೂ ದೇಶಗಳ ನಡುವೆ ಈ ಒಪ್ಪಂದಕ್ಕೆ ಬರಲಾಯಿತು. ಮಾತುಕತೆಯ ಸಮಯದಲ್ಲಿ, ತಕ್ಷಣದ ಕದನ ವಿರಾಮಕ್ಕೆ ಹಾಗೂ ಎರಡೂ ದೇಶಗಳ ನಡುವೆ ಶಾಶ್ವತ ಶಾಂತಿ ಮತ್ತು ಸ್ಥಿರತೆಯನ್ನು ಖಚಿತಪಡಿಸಿಕೊಳ್ಳುವ ಗುರಿಯನ್ನು ಹೊಂದಿರುವ ಕಾರ್ಯವಿಧಾನಗಳನ್ನು ರಚಿಸಲು ಅನುಸರಣಾ ಸಭೆಗಳನ್ನು ನಡೆಸಲು ಎರಡೂ ಕಡೆಯವರು ಒಪ್ಪಿಕೊಂಡಿದ್ದಾರೆ ಎಂದು ಕತಾರ್ ವಿದೇಶಾಂಗ ಸಚಿವಾಲಯ ತಿಳಿಸಿದೆ. ಪಾಕಿಸ್ತಾನದ ನಿಯೋಗದಲ್ಲಿ ರಕ್ಷಣಾ ಸಚಿವ ಖವಾಜಾ ಆಸಿಫ್ ಮತ್ತು ಗುಪ್ತಚರ ಮುಖ್ಯಸ್ಥ ಜನರಲ್ ಅಸಿಮ್ ಮಲಿಕ್ ಇದ್ದರು. ಅಫ್ಘಾನಿಸ್ತಾನವನ್ನು ರಕ್ಷಣಾ ಸಚಿವ ಮೊಹಮ್ಮದ್ ಯಾಕೂಬ್ ಪ್ರತಿನಿಧಿಸಿದರು. ೪೮ ಗಂಟೆಗಳ ಕದನ ವಿರಾಮವನ್ನು ಪಾಕಿಸ್ತಾನ ಉಲ್ಲಂಘಿಸಿದೆ ಎಂದು ಅಫ್ಘಾನಿಸ್ತಾನ ಈ ಹಿಂದೆ ಆರೋಪಿಸಿತ್ತು. ಈ ಸಮಯದಲ್ಲಿ ಎರಡೂ ಕಡೆಗಳಲ್ಲಿ ಅನೇಕ ಸೈನಿಕರು ಮತ್ತು ನಾಗರಿಕರು ಮೃತಪಟ್ಟರು. ಅಫ್ಘಾನಿಸ್ತಾನದ ಪಕ್ತಿಕಾ ಪ್ರಾಂತ್ಯದ ಮೇಲೆ ಪಾಕಿಸ್ತಾನ ನಡೆಸಿದ ದಾಳಿಯಲ್ಲಿ ಮೂವರು ಕ್ರಿಕೆಟಿಗರು ಸೇರಿದಂತೆ ಕನಿಷ್ಠ ೧೭ ಜನರು ಸಾವನ್ನಪ್ಪಿದ್ದರು.

><><><><

ಉತ್ತರ ಪ್ರದೇಶದ ಅಯೋಧ್ಯೆಯಲ್ಲಿ ಇಂದು ಸಂಜೆ ವಾರ್ಷಿಕ ದೀಪೋತ್ಸವದ ಒಂಬತ್ತನೇ ಆವೃತ್ತಿಗೆ ವೇದಿಕೆ ಸಜ್ಜಾಗಿದೆ. ಕಳೆದ ವರ್ಷದ ದಾಖಲೆಯನ್ನು ಮುರಿಯಲು ಭವ್ಯ ಸಿದ್ಧತೆಗಳು ನಡೆಯುತ್ತಿವೆ. ಅಯೋಧ್ಯೆ ನಗರದಾದ್ಯಂತ ೨೬ ಲಕ್ಷಕ್ಕೂ ಹೆಚ್ಚು ದೀಪಗಳನ್ನು ಬೆಳಗಿಸಲಾಗುತ್ತದೆ. ಈ ವರ್ಷ, ರಾಮ್ ಕಿ ಪೌಡಿ ಉದ್ದಕ್ಕೂ ೫೬ ಘಾಟ್‌ಗಳಲ್ಲಿ ದಾಖಲೆಯ ೨೬ ಲಕ್ಷ ೧೧ ಸಾವಿರ ೧೦೧ ಮಣ್ಣಿನ ದೀಪಗಳು ಬೆಳಗಲಿವೆ. ಪವಿತ್ರ ಸರಯು ನದಿಯ ದಡದಲ್ಲಿ ಈ ದೀಪಗಳ ಪ್ರಕಾಶಮಾನವಾದ ಬೆಳಕು, ಜಾಗತಿಕ ವೇದಿಕೆಯಲ್ಲಿ ಅಯೋಧ್ಯೆಯ ಆಧ್ಯಾತ್ಮಿಕ ಮತ್ತು ಸಾಂಸ್ಕೃತಿಕ ಭವ್ಯತೆಯನ್ನು ಪ್ರದರ್ಶಿಸುತ್ತದೆ. ಇದೇ ವೇಳೆ ಇಂದು ಸಂಜೆ ಸರಯು ಆರತಿಯನ್ನು ಸಹ ಆಯೋಜಿಸಲಾಗಿದೆ.

><><><><

ಕರ್ನಾಟಕ ಶಾಸ್ತ್ರೀಯ ಸಂಗೀತದಲ್ಲಿ ಖ್ಯಾತರಾದ ಗಾನ ಕಲಾ ಭೂಷಣ ವಿದುಷಿ ಆರ್.ಎ.ರಮಾಮಣಿ ನಿನ್ನೆ ಅಲ್ಪಕಾಲದ ಅನಾರೋಗ್ಯದಿಂದಾಗಿ ನಿಧನರಾಗಿದ್ದಾರೆ. ಅವರು ಪುತ್ರ ವಿದ್ವಾನ್ ಕಾರ್ತಿಕ್ ಮಣಿ ಮತ್ತು ಅಪಾರ ಶಿಷ್ಯರನ್ನು ಅಗಲಿದ್ದಾರೆ. ವಿದುಷಿ ಆರ್.ಎ.ರಮಾಮಣಿ ಹಾಗೂ ಅವರ ಪತಿ, ಮೃದಂಗ ವಿದ್ವಾನ್ ಗಾನಕಲಾ ಭೂಷಣ ದಿವಂಗತ ಟಿ.ಎ.ಎಸ್.ಮಣಿ ಅವರು ಸುಮಾರು ಐದು ದಶಕಗಳ ಕಾಲ ದೇಶ-ವಿದೇಶಗಳಲ್ಲಿ ಕರ್ನಾಟಕ ಸಂಗೀತವನ್ನು ಜನಪ್ರಿಯಗೊಳಿಸುವಲ್ಲಿ ಪ್ರಮುಖ ಪಾತ್ರ ವಹಿಸಿದ್ದರು.

><><><><

ಭಾರತ - ಆಸ್ಟ್ರೇಲಿಯಾ ನಡುವಿನ ಮೂರು ಪಂದ್ಯಗಳ ಏಕದಿನ ಸರಣಿ ಆಸ್ಟ್ರೇಲಿಯಾದ ಪರ್ತ್‌ನಲ್ಲಿ ಇಂದಿನಿಂದ ಆರಂಭವಾಗಲಿದೆ. ಈ ಪಂದ್ಯದಲ್ಲಿ ವಿರಾಟ್ ಕೊಹ್ಲಿ ಹಾಗೂ ರೋಹಿತ್ ಶರ್ಮಾ ಕಣಕ್ಕಿಳಿಯಲಿದ್ದಾರೆ. ಈಗಾಗಲೇ ಉಭಯ ಆಟಗಾರರು ಟಿ-೨೦ ಪಂದ್ಯಗಳಿಂದ ನಿವೃತ್ತಿ ಹೊಂದಿದ್ದಾರೆ. ಈ ಸರಣಿ ಮೂಲಕ ಶುಭ್‌ಮನ್ ಗಿಲ್ ಏಕದಿನ ಪಂದ್ಯವನ್ನು ಮುನ್ನಡೆಸಲಿದ್ದಾರೆ. ಈ ಸರಣಿಯಲ್ಲಿ ಮೂರು ಏಕದಿನ ಪಂದ್ಯಗಳು ಹಾಗೂ ಐದು ಟಿ-೨೦ ಪಂದ್ಯಗಳು ನಡೆಯಲಿವೆ. ಮೊದಲ ಏಕದಿನ ಪಂದ್ಯ ಭಾರತೀಯ ಕಾಲಮಾನ ಇಂದು ಬೆಳಗ್ಗೆ ೯ ಗಂಟೆಗೆ ಆರಂಭವಾಗಲಿದೆ.

><><><><

ಮಧ್ಯಪ್ರದೇಶದ ಇಂದೋರ್‌ನ ಹೋಳ್ಕರ್ ಕ್ರೀಡಾಂಗಣದಲ್ಲಿ ಇಂದು ನಡೆಯುವ ಐಸಿಸಿ ಮಹಿಳಾ ಏಕದಿನ ಕ್ರಿಕೆಟ್ ವಿಶ್ವಕಪ್ ಪಂದ್ಯದಲ್ಲಿ ಭಾರತ ಇಂದು ಇಂಗ್ಲೆಂಡ್ ತಂಡವನ್ನು ಎದುರಿಸಲಿದೆ. ಪಂದ್ಯ ಮಧ್ಯಾಹ್ನ ೩ ಗಂಟೆಗೆ ಪ್ರಾರಂಭವಾಗಲಿದೆ.

><><><><

ಮಲೇಷ್ಯಾದಲ್ಲಿ ನಿನ್ನೆ ನಡೆದ ಸುಲ್ತಾನ್ ಆಫ್ ಜೊಹೊರ್ ಕಪ್ ಹಾಕಿ ೨೦೨೫ ರ ಫೈನಲ್‌ನಲ್ಲಿ ಆಸ್ಟ್ರೇಲಿಯಾ ವಿರುದ್ಧ ೨-೧ ಅಂತರದಲ್ಲಿ ಸೋತ ನಂತರ ಭಾರತ ಬೆಳ್ಳಿ ಪದಕ ಗೆದ್ದಿದೆ.

><><><><